**All India Radio: Bangalore**
**Regional Bulletin In Kannada**
**22.11.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**22.11.2025 / 6.40 p.m.**
*******************

ಮುಖ್ಯಾಂಶಗಳು

೧. ಮೀನುಗಾರಿಕೆ ವಿಶ್ವ ವಿದ್ಯಾನಿಲಯ ಸ್ಥಾಪಿಸಲು ಸರ್ಕಾರ ಸಿದ್ಧ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಭಾರತದಿಂದ ಪ್ರಸಕ್ತ ಸಾಲಿನಲ್ಲಿ ೬೦೦ ಕೋಟಿ ರೂಪಾಯಿ ಮೌಲ್ಯದ ಮೆಕ್ಕೆಜೋಳ ರಫ್ತು ; ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ಪಷ್ಟನೆ

೩. ೬೧೮ ಕೋಟಿ ರೂಪಾಯಿ ವೆಚ್ಚದ ಉಜಿರೆ-ಧರ್ಮಸ್ಥಳ-ಪೆರಿಯಶಾಂತಿ ದ್ವಿಪಥ ರಸ್ತೆಗೆ ಇಂದು ಶಿಲಾನ್ಯಾಸ

೪. ರಾಜ್ಯದಲ್ಲಿ ಜನವರಿಯಿಂದ 'ಇಂದಿರಾ ಆಹಾರ ಕಿಟ್' ಯೋಜನೆ ಜಾರಿಗೆ

***************

ಮೀನುಗಾರಿಕಾ ವಿಶ್ವ ವಿದ್ಯಾಲಯ ಸ್ಥಾಪಿಸಲು ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಮೀನುಗಾರಿಕೆ ಇಲಾಖೆ ಆಯೋಜಿಸಿದ್ದ "ವಿಶ್ವ ಮೀನುಗಾರಿಕಾ ದಿನಾಚರಣೆ ಮತ್ತು ೨೦೨೫ರ ಮತ್ಸ್ಯ ಮೇಳ" ವನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ೩೨೦ ಕಿಲೋಮೀಟರ್ ಕರಾವಳಿ ಪ್ರದೇಶ ಹಾಗೂ ೫ ಲಕ್ಷ ೫೦ ಸಾವಿರ ಹೆಕ್ಟೇರ್ ಒಳನಾಡು ಜಲಪ್ರದೇಶ ಇದೆ. ಮೀನು ರಫ್ತಿನಲ್ಲಿ ರಾಜ್ಯ ನಾಲ್ಕನೇ ಸ್ಥಾನದಲ್ಲಿದೆ. ದೇಶದ ಮೀನು ಉತ್ಪಾದನೆಯಲ್ಲಿ ರಾಜ್ಯ ೩ನೇ ಸ್ಥಾನದಲ್ಲಿದೆ. ಒಟ್ಟಾರೆ ಮೀನುಗಾರಿಕೆ ೧೦ ಲಕ್ಷ ಜನರ ಜೀವನ ಆಸರೆಯಾಗಿದೆ ಎಂದು ಹೇಳಿದ್ದಾರೆ.

ಧ್ವನಿ : ಸಿದ್ದರಾಮಯ್ಯ (೩೨ ಸೆಕೆಂಡ್‌ಗಳು)

ನಮ್ಮ ಸರ್ಕಾರ ಅಸ್ತಿತ್ವಕ್ಕೆ ಬಂದ ಮೇಲೆ ಯಾಂತ್ರೀಕೃತ ದೋಣಿಗಳ ಡೀಸೆಲ್ ವಾರ್ಷಿಕ ಮಿತಿಯನ್ನು ೧ ಲಕ್ಷ ೫೦ ಸಾವಿರ ಕಿಲೋ ಲೀಟರ್ ನಿಂದ ೨ ಲಕ್ಷ ಕಿಲೋ ಲೀಟರ್‌ಗೆ ಹೆಚ್ಚಿಸಲಾಗಿದೆ. ನಾಡ ದೋಣಿಗಳಿಗೆ ಕೈಗಾರಿಕಾ ಸೀಮೆ ಎಣ್ಣೆಯನ್ನು ಪ್ರತೀ ಲೀಟರ್‌ಗೆ ೩೫ ರೂಪಾಯಿ ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಮೀನುಗಾರ ಸಮುದಾಯದ ಏಳಿಗೆಗೆ ಸರ್ಕಾರ ಪ್ರತೀ ಬಜೆಟ್ ನಲ್ಲೂ ಕಾರ್ಯಕ್ರಮಗಳನ್ನು ನೀಡುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಭಾರತ ಸರ್ಕಾರ ಈ ವರ್ಷ ೬೦೦ ಕೋಟಿ ರೂಪಾಯಿ ಮೌಲ್ಯದ ಮೆಕ್ಕೆಜೋಳ ರಫ್ತು ಮಾಡಿದೆ. ನಾಫೆಡ್ ನವರು ಜೋಳ ಖರೀದಿ ಮಾಡಲು ತಯಾರಿದ್ದಾರೆ. ಅದಕ್ಕೆ ಇಂಡೆಂಟ್ ರಾಜ್ಯ ಸರ್ಕಾರ ಕೊಡಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ೭೦ ಲಕ್ಷ ಟನ್ ಮೆಕ್ಕೆ ಜೋಳ ಆಮದು ಮಾಡಿಕೊಳ್ಳಲಾಗಿದೆ ಎಂದು ಜನರ ದಾರಿ ತಪ್ಪಿಸುತ್ತಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯ ಸರ್ಕಾರ ಆಡಳಿತ ನಡೆಸಲು ವಿಫಲವಾಗಿದೆ. ಗೃಹ ಲಕ್ಷ್ಮಿ ಹಣ ಆಗಸ್ಟ್ ನಿಂದ ಬಾಕಿಯಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಬೆಂಗಳೂರು ನಲ್ಲಿ ಹಾಡಹಗಲೇ ದರೋಡೆ ಆಗುತ್ತಿದೆ. ಸರ್ಕಾರಕ್ಕೆ ಆಡಳಿತ ಮೇಲೆ ಗಮನ ಕಡಿಮೆಯಾಗಿದೆ. ಪೊಲೀಸ್ ಇಲಾಖೆಯಲ್ಲಿ ಭ್ರಷ್ಟಾಚಾರ ಮಿತಿಮೀರಿದೆ ಎಂದು ಅವರು ಆರೋಪಿಸಿದರು.

ಧ್ವನಿ : ಪ್ರಲ್ಹಾದ್ ಜೋಶಿ (೨೨ ಸೆಕೆಂಡ್‌ಗಳು)

***************

ದಕ್ಷಿಣ ಕನ್ನಡ ಜಿಲ್ಲೆಯ ಉಜಿರೆ-ಧರ್ಮಸ್ಥಳ-ಪೆರಿಯಶಾಂತಿ ರಸ್ತೆ ೬೧೬ ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿ ಹೊಂದಲಿದ್ದು, ಇಂದು ರಾಜ್ಯ ಸಭಾ ಸದಸ್ಯ ಡಾ.ಡಿ.ವೀರೇಂದ್ರ ಹೆಗ್ಗಡೆ ಶಿಲಾನ್ಯಾಸ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಈ ರಸ್ತೆಗಳು ಅಭಿವೃದ್ಧಿ ಹೊಂದುವುದರಿಂದ ಇಡೀ ರಾಜ್ಯದ ಜನತೆಗೆ ಅನುಕೂಲವಾಗಲಿದೆ. ಇದು ಈ ಅಭಿವೃದ್ಧಿ ಕಾಮಗಾರಿ ರಾಷ್ಟ್ರೀಯ ಕಲ್ಪನೆಯ ಯೋಜನೆಯಾಗಿದೆ ಎಂದರು.

ರಾಜ್ಯದ ನಾನಾ ಕಡೆಗಳಿಂದ ಬರುವ ಸಾರ್ವಜನಿಕರಿಗೆ ಇದು ಸಂಪರ್ಕ ರಸ್ತೆಯಾಗಿದೆ. ರಸ್ತೆ ಅಭಿವೃದ್ಧಿ ಅಗಲೀಕರಣ ಸಂದರ್ಭ ಧರೆ ಕುಸಿತದಿಂದ ಸಮಸ್ಯೆಯಾಗುತ್ತದೆ. ಧರೆ ಕುಸಿಯದಂತೆ ಅದನ್ನು ತಪ್ಪಿಸಲು ಕವರ್ ಕ್ರಾಫ್ ನೆಡಬೇಕು. ರಸ್ತೆ ಅಭಿವೃದ್ಧಿಯಿಂದ ಜನರಿಗೆ ಸಮಯದ ಉಳಿತಾಯದ ಜತೆಗೆ ನೇತ್ರಾವತಿಯಿಂದ ಧರ್ಮಸ್ಥಳದವರೆಗೆ ಅಂಡರ್ ಪಾಸ್ ರಸ್ತೆಯಿಂದಾಗಿ ಸಂಚಾರ ಸುಲಭವಾಗಲಿದೆ ಎಂದರು.

ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಮಾತನಾಡಿ, ಮಂಗಳೂರು-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಶಿರಾಡಿ ಘಾಟ್ ಭಾಗದಲ್ಲಿ ಹೆದ್ದಾರಿ, ರೈಲ್ವೇ ಸುರಂಗ ಮಾರ್ಗಕ್ಕೆ ಸಂಬಂಧಿಸಿ ಕೇಂದ್ರ ಹೆದ್ದಾರಿ ಇಲಾಖೆ ಸಚಿವ ನಿತಿನ್ ಗಡ್ಕರಿಯವರು ಒಪ್ಪಿಗೆ ಸೂಚಿಸಿದ್ದಾರೆ. ಅದರ ಕಾರ್ಯಸಾಧ್ಯತೆಯ ಅಧ್ಯಯನ ಮಾಡಿ ಈ ಯೋಜನೆಯಿಂದ ಪರಿಸರಕ್ಕೆ ಹಾನಿಯಾಗದ ರೀತಿ ಅನುಷ್ಠಾನ ಗೊಳಿಸುವ ಪ್ರಯತ್ನ ಮಾಡಲಾಗುವುದು ಎಂದರು.

***************

ಮಂಗಳೂರು ವಿಶ್ವವಿದ್ಯಾಲಯದಲ್ಲಿ ಡಿಸೆಂಬರ್ ೩ರಂದು ಬ್ರಹ್ಮಶ್ರೀ ನಾರಾಯಣಗುರು ಮತ್ತು ಮಹಾತ್ಮಾ ಗಾಂಧಿ ಐತಿಹಾಸಿಕ ಸಂವಾದ ಶತಮಾನೋತ್ಸವ ಕಾರ್ಯಕ್ರಮ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸಲಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್ ತಿಳಿಸಿದ್ದಾರೆ.

ಮತಕಳ್ಳತನ ವಿರುದ್ಧ ಕಾಂಗ್ರೆಸ್ ದೇಶಾದ್ಯಂತ ಐದು ಕೋಟಿ ಸಹಿ ಸಂಗ್ರಹ ನಡೆಸುತ್ತಿದ್ದು, ರಾಜ್ಯದಲ್ಲಿ ೧ ಕೋಟಿ ೨೪ ಲಕ್ಷ ಸಹಿ ಸಂಗ್ರಹಿಸಿ ರವಾನಿಸಲಾಗಿದೆ. ಐದು ಕೋಟಿ ಸಹಿಯನ್ನು ರಾಷ್ಟ್ರಪತಿಗೆ ಸಲ್ಲಿಸಲಾಗುವುದು. ಡಿಸೆಂಬರ್ ೧೪ರಂದು ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಮತಕಳ್ಳತನ ವಿರುದ್ಧ ಬೃಹತ್ ಪ್ರತಿಭಟನೆ ಆಯೋಜಿಸಲಾಗಿದೆ. ಮತಕಳ್ಳತನ ವಿಚಾರದಲ್ಲಿ ಚುನಾವಣಾ ಆಯೋಗ ತಪ್ಪು ಮಾಡಿದೆ ಎಂದು ಅವರು ಹೇಳಿದ್ದಾರೆ.

***************

ವಿಧಾನಸೌಧದಲ್ಲಿ ಇಂದು ನಡೆದ ಕರ್ನಾಟಕದ ಜಲ ಸಂಪನ್ಮೂಲ ಇಲಾಖೆಯ ನಾನಾ ನಿಗಮಗಳ ವಿವಿಧ ಯೋಜನೆಗಳ ಭೂಸ್ವಾಧೀನ ಹಾಗೂ ನಾನಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಅಂತಾರಾಜ್ಯ ಜಲ ವಿವಾದಗಳ ಪರಿಶೀಲನೆ ಸಭೆ ಜಲ ಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ನಡೆಯಿತು.

ಕಾನೂನು ಸಚಿವ ಎಚ್.ಕೆ ಪಾಟೀಲ್, ಕಂದಾಯ ಸಚಿವ ಕೃಷ್ಣ ಬೈರೇಗೌಡ, ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ, ಸುಪ್ರೀಂ ಕೋರ್ಟ್ ಹಿರಿಯ ವಕೀಲ ಮೋಹನ್ ವಿ ಕಾತರಕಿ, ಸೇರಿದಂತೆ ಹಲವು ವಕೀಲರು ಹಾಗೂ ಅಧಿಕಾರಿಗಳು ಪಾಲ್ಗೊಂಡಿದ್ದರು.

***************

ಮುಂದಿನ ಜನವರಿಯಿಂದ 'ಇಂದಿರಾ ಆಹಾರ ಕಿಟ್' ಯೋಜನೆ ಜಾರಿಗೆ ಬರಲಿದ್ದು, ಬಡ ಜನರ ಆರ್ಥಿಕ ಅಭಿವೃದ್ಧಿಗೆ ಸರ್ಕಾರ ಶ್ರಮಿಸುತ್ತಿದೆ.

ಚುನಾವಣಾ ಸಂದರ್ಭದಲ್ಲಿ ರಾಜ್ಯದ ಜನರಿಗೆ ಭರವಸೆ ನೀಡಿದಂತೆ 'ಪಂಚ ಗ್ಯಾರಂಟಿ' ಯೋಜನೆಗಳನ್ನು ಜಾರಿಗೊಳಿಸಿ ರಾಜ್ಯದ ಎಲ್ಲಾ ಜನರಿಗೆ ಒಂದಲ್ಲ ಒಂದು ಸೌಲಭ್ಯಗಳು ತಲುಪುವಂತೆ ಮಾಡುವಲ್ಲಿ ಸರ್ಕಾರ ಶ್ರಮಿಸುತ್ತಿದೆ  ಎಂದು ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಭೋಸರಾಜು ಹೇಳಿದ್ದಾರೆ.

ಮಡಿಕೇರಿಯಲ್ಲಿಂದು ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಗ್ಯಾರಂಟಿ ಉತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯದಲ್ಲಿ ೪ ಲಕ್ಷ ಕೋಟಿ ಬಜೆಟ್‌ನಲ್ಲಿ ೫೫ ಸಾವಿರ ಕೋಟಿ ರೂಪಾಯಿಯನ್ನು ವಾರ್ಷಿಕವಾಗಿ ಗ್ಯಾರಂಟಿ ಯೋಜನೆಗೆ ಬಳಸಲಾಗುತ್ತಿದೆ ಎಂದು ಹೇಳಿದರು. ಶಕ್ತಿ ಯೋಜನೆಯಡಿ ರಾಜ್ಯದಲ್ಲಿ ೭೦೦ ಕೋಟಿ ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡಿದ್ದಾರೆ  ಎಂದು ಸಚಿವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಅಧ್ಯಕ್ಷ ಎಚ್.ಎಂ.ರೇವಣ್ಣ ಗ್ಯಾರಂಟಿ ಯೋಜನೆಗಳ ಬಗ್ಗೆ ತಳಮಟ್ಟದಲ್ಲಿ ಮತ್ತಷ್ಟು ಜಾಗೃತಿ ಮೂಡಿಸಬೇಕು. ರಾಜ್ಯದಲ್ಲಿ ೭ ರಿಂದ ೮ ಸಾವಿರ ಕುಟುಂಬಗಳಿಗೆ ಗ್ಯಾರಂಟಿ ಯೋಜನೆ ತಲುಪುತ್ತಿದೆ ಎಂದು ಹೇಳಿದರು.

ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಪುಷ್ಪ ಅಮರನಾಥ್ ಮಾತನಾಡಿ, ಸರ್ಕಾರದ ಅಭಿವೃದ್ಧಿ ಕೆಲಸಗಳು ಉಳಿಯುತ್ತವೆ. ಟೀಕೆಗಳು ಸಾಯುತ್ತವೆ ಎಂದು ಹೇಳಿದರು.

ಮುಖ್ಯಮಂತ್ರಿ ಅವರ ಕಾನೂನು ಸಲಹೆಗಾರ ಎ.ಎಸ್.ಪೊನ್ನಣ್ಣ ಮಾತನಾಡಿ ಗ್ಯಾರಂಟಿ ಕಾರ್ಯಕ್ರಮಗಳು ಬಡ ಜನರ ಖಾತೆಗೆ ಹಣ ನೇರವಾಗಿ ತಲುಪುತ್ತಿದೆ ಎಂದರು.

***************

ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಕೆರೆಗಳಿಗೆ ನೀರು ತುಂಬಿಸುತ್ತಿದ್ದು, ಈ ಕೆರೆಗಳಲ್ಲಿ ಮೀನುಗಾರಿಕೆ ಮಾಡಲು ಅವಕಾಶ ಕಲ್ಪಿಸಿಕೊಡಲಿದೆ. ಮೀನುಗಾರರಿಗೆ ಅಗತ್ಯ ಪ್ರೋತ್ಸಾಹ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಹೆಬ್ಬಾಳದ ಪಶುವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಇಂದು ನಡೆದ ವಿಶ್ವ ಮೀನುಗಾರಿಕೆ ದಿನಾಚರಣೆ ಹಾಗೂ ಮತ್ಸ್ಯ ಮೇಳದಲ್ಲಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಕರಾವಳಿ ಭಾಗಕ್ಕೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ರೂಪಿಸಲಾಗುವುದು. ಮೀನುಗಾರಿಕೆಗೆ ಉತ್ತೇಜನ ನೀಡಲು ಕಾರ್ಯಕ್ರಮ ರೂಪಿಸಲಾಗುವುದು ಎಂದು ತಿಳಿಸಿದರು.

***************

ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಗದಗ ತಾಲೂಕಿನ ನಾಗಾವಿ ಗ್ರಾಮದ ಗೋವಿಂದರಡ್ಡಿ ಭರಮಗೌಡ್ರ ಇವರ ಹೊಲದಲ್ಲಿ "ಭೀಮಾ ಸೂಪರ್" ಈರುಳ್ಳಿ ತಳಿಯ ಕ್ಷೇತ್ರೋತ್ಸವ ಜರುಗಿತು.

ಕೃಷಿ ವಿಜ್ಞಾನಿ ಹೇಮಾವತಿ ಹಿರೇಗೌಡರ ಮಾತನಾಡಿ, ಭೀಮಾ ಸೂಪರ್ ತಳಿಯು ಸುಧಾರಿತ ಈರುಳ್ಳಿ ತಳಿಯಾಗಿದ್ದು, ಇದು ಈರುಳ್ಳಿ ಮತ್ತು ಬೆಳ್ಳುಳ್ಳಿ ನಿರ್ದೇಶನಾಲಯ, ಪುಣೆ ಇಂದ ಬಿಡುಗಡೆಯಾಗಿದ್ದು, ಎಲೆಗಳಿಗೆ ಬರುವ ನೇರಳೆ ಚುಕ್ಕೆ ರೋಗವನ್ನು ತಡೆದುಕೊಳ್ಳುವ ಶಕ್ತಿ ಹೊಂದಿದೆ. ನೀರಾವರಿಯಲ್ಲಿ ಪ್ರತಿ ಎಕರೆಗೆ ೧೯೦ ಕ್ವಿಂಟಾಲ್ ನಷ್ಟು ಇಳುವರಿ ಕೊಡುವ ಸಾಮರ್ಥ್ಯ ಇದೆ ಎಂದು ತಿಳಿಸಿದರು.

ವಿಜ್ಞಾನಿಗಳಾದ ಎನ್.ಎಸ್ ಬಂಡಿ, ಎಸ್.ಕೆ.ಮುದ್ಲಾಪುರ ಅವರು ಈರುಳ್ಳಿ ಬೆಳೆಗೆ ಬರುವ ಪ್ರಮುಖ ಕೀಟ ಮತ್ತು ರೋಗಗಳ ನಿರ್ವಹಣಾ ಕ್ರಮಗಳ ಕುರಿತು ಮಾಹಿತಿ ನೀಡಿದರು.

*******ಮುಕ್ತಾಯ*******